ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 12-04-2017

# ಪತ್ರಿಕಾ ಆಮಂತ್ರಣ

1. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೊಗದ ಅಧ್ಯಕ್ಷರಾದ ಎಂ. ಆರ್. ವೆಂಕಟೇಶ್ ಅವರು ಹಾಗೂ ಸದಸ್ಯರಾದ ಜೆ.ಕೆ. ಮೀನಾಕ್ಷಮ್ಮ ಗೋಕುಲ ನಾರಾಯಣಸ್ವಾಮಿ ಹಾಗೂ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸ್ವಚ್ಛತಾ ಕೆಲಸಗಾರರ ಶ್ರೇಯೋಭಿವೃದ್ಧಿಗಾಗಿ ಇವರ ಕುಂದುಕೊರತೆಗಳ ಕುರಿತು ಸಭೆ:

   ದಿನಾಂಕ: 13-04-2017, ಗುರುವಾರ, ಬೆಳಿಗ್ಗೆ 11-00 ಗಂಟೆಗೆ

   ಸ್ಥಳ: ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ, ಬೆಂಗಳೂರು.

# ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

ಏಪ್ರಿಲ್ 14, 2017 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಘನತೆವೆತ್ತ ರಾಷ್ಟ್ರಪತಿಯವರು ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಶಂಕುಸ್ಥಾಪನೆ ನೆರವೇರಿಸುವರು.

ಈ ಕಾರ್ಯಕ್ರಮದ ವರದಿಗಾಗಿ ಸರ್ಕಾರದ ಉನ್ನತ ಮಟ್ಟದ ಸಭೆಯಲ್ಲಿ ನಿರ್ಣಯವಾದಂತೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆ ಮತ್ತು ವಿದ್ಯುನ್ಮಾನ ಮಾಧ್ಯಮದ ವರದಿಗಾರರಿಗೆ ತಲಾ ಒಂದು ಆಮಂತ್ರಣ ಪತ್ರವನ್ನು ವಾರ್ತಾ ಇಲಾಖೆಯಲ್ಲಿ ವಿತರಿಸಲಾಗುವುದು. ಈ ಆಮಂತಣ ಪತ್ರಿಕೆ ಪಡೆದವರಿಗೆ ಪೋಲೀಸ್ ಆಯುಕ್ತರ ಕಚೇರಿಯವರು ರಹದಾರಿ ಪತ್ರವನ್ನು ನೀಡಲಿದ್ದಾರೆ,

ಭದ್ರತಾ ಹಿನ್ನೆಲೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಆಮಂತ್ರಣ ಪತ್ರಿಕೆ ಮತ್ತು ಪೋಲೀಸ್ ಆಯುಕ್ತರ ರಹದಾರಿ ಪತ್ರ ಹೊಂದುವುದು ಕಡ್ಡಾಯವಾಗಿರುತ್ತದೆ,

ಆದ್ದರಿಂದ ಈ ಕಾರ್ಯಕ್ರಮದ ವರದಿಗೆ ತಮ್ಮ ಮಾಧ್ಯಮ ಸಂಸ್ಥೆಯಿಂದ ನಿಯೋಜಿಸುವ ವರದಿಗಾರರ ಹೆಸರು ಸೂಚಿಸಿ ಶಿಫಾರಸ್ಸು ಪತ್ರವನ್ನು ದಿನಾಂಕ 13-4-2017 ರ ಸಂಜೆ 5-00 ಗಂಟೆಯೊಳಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಸಲ್ಲಿಸಿ ಆಮಂತ್ರಣ ಪತ್ರವನ್ನು ಪಡೆದುಕೊಳ್ಳಬಹುದು.

ಕಾರ್ಯಕ್ರಮದ ಛಾಯಾಚಿತ್ರವನ್ನು ದಿನಪತ್ರಿಕೆಗಳಿಗೆ ವಾರ್ತಾ ಇಲಾಖೆಯಿಂದ ಬಿಡುಗಡೆ ಮಾಡಲಾಗುವುದು, ಮತ್ತು ವಿದ್ಯುನ್ಮಾನ ಮಾಧ್ಯಮಗಳಿಗೆ ವಿಕಾಸಸೌಧದ ಆವರಣದಲ್ಲಿ viwiyO ಔಟ್-ಪುಟ್ ನೀಡುವ ವ್ಯವಸ್ಥೆಯನ್ನು ಕಲ್ಪಿಸಲಾಗುವುದು. ಹಾಗೆಯೇ ವಿದ್ಯುನ್ಮಾನ ಮಾಧ್ಯಮದ ಒಬಿ ವಾಹನಗಳಿಗೆ ವಿಕಾಸಸೌಧ ಆವರಣದಲ್ಲಿ ಸ್ಥಳಾವಕಾಶವನ್ನು ಒದಗಿಸಲಾಗುವುದು. ***(ಪಾಸ್ ಪಡೆಯುವ ಸಂದರ್ಭದಲ್ಲಿ ಪೋಲೀಸ್ ಆಯುಕ್ತರ ಕಛೇರಿಗೆ ಇತ್ತೀಚಿನ ಎರಡು ಸ್ಟಾಂಪ್ ಅಳತೆಯ ಭಾವಚಿತ್ರವನ್ನು ಸಲ್ಲಿಸಬೇಕು)***

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## "31 ನೇ ಅಖಿಲ ಕರ್ನಾಟಕ ಉದಯೋನ್ಮುಖ ವಿಜ್ಞಾನ ಲೇಖಕರ ತರಬೇತಿ ಶಿಬಿರ"

ಬೆಂಗಳೂರು, ಏಪ್ರಿಲ್ 12 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಹಾಗೂ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರ, ಧಾರವಾಡ ಇವುಗಳ ಸಂಯುಕ್ತಾಶ್ರಯದಲ್ಲಿ ರಾಜ್ಯದ ಉದಯೋನ್ಮುಖ ವಿಜ್ಞಾನ ಬರಹಗಾರರಿಗೆ, ಕಾರ್ಯನಿರತ ವಿಜ್ಞಾನ ಪತ್ರಿಕೋದ್ಯಮಿಗಳು – ವರದಿಗಾರರಿಗೆ ಜನಪ್ರಿಯ ವಿಜ್ಞಾನ ಬರವಣಿಗೆಯ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ವಿಜ್ಞಾನ ಬರವಣಿಗೆಯಲ್ಲಿ ಆಸಕ್ತಿ ಇರುವ ವಿಜ್ಞಾನ ಶಿಕ್ಷಕರು, ಯುವ ಪತ್ರಿಕಾ ವರದಿಗಾರರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು, ಚಿತ್ರ ನಿರೂಪಕರು, ರೇಡಿಯೋ ಭಾಷಣಕಾರರು ಶಿಬಿರದಲ್ಲಿ ಭಾಗವಹಿಸಬಹುದು.

ಶಿಬಿರವನ್ನು ಮೇ 2017 ಕೊನೆಯ ವಾರದಲ್ಲಿ ಆಯೋಜಿಸಲಾಗುತ್ತಿದ್ದು, ಶಿಬಿರದಲ್ಲಿ ನುರಿತ ವಿಜ್ಞಾನ ಬರಹಗಾರರು/ಸಂವಹಕಾರದಿಂದ ಶಿಬಿರಾರ್ಥಿಗಳಿಗೆ ವಿಜ್ಞಾನ ಬರವಣಿಗೆಯ ಕುರಿತ ವಿವಿಧ ಕೌಶಲ್ಯ, ಆಕರ, ಶಬ್ದ ಬಳಕೆ, ಅನುವಾದ ವಿಜ್ಞಾನ ಪತ್ರಿಕೋದ್ಯಮ, ಮುಂತಾದ ಅಂಶಗಳಲ್ಲಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಶಿಬಿರಾರ್ಥಿಗಳಾಗಿ ಭಾಗವಹಿಸಲಿಚ್ಛಿಸುವವರು ವಿಜ್ಞಾನ ಸಂವಹನದಲ್ಲಿ ವಿಶೇಷ ಆಸಕ್ತಿ ಹೊಂದಿರುವುದು ಅಪೇಕ್ಷಣೀಯ. ಆಸಕ್ತರು ತಮ್ಮ ಕಿರುಪರಿಚಯ, ಸಂಪರ್ಕ ವಿಳಾಸ, ದೂರವಾಣಿ ಸಂಖ್ಯೆ, ಇ–ಮೇಲ್ ಇತ್ಯಾದಿ ವಿವರಗಳು ಮತ್ತು ಎಲ್ಲೂ ಪ್ರಕಟಗೊಳ್ಳದ 800 ಮತ್ತು 250 ಪದಗಳ 2 ಕನ್ನಡ ವೈಜ್ಞಾನಿಕ ಲೇಖನಗಳ ಸ್ವ ರಚಿತ ಪ್ರತಿಯೊಂದಿಗೆ ಅರ್ಜಿಯನ್ನು ಗೌರವ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಭವನ, ನಂ 24/2, 21ನೇ ಮುಖ್ಯರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು – 560 070 ಇ–ಮೇಲ್ – krvp.info@gmail.com ಈ ವಿಳಾಸಕ್ಕೆ ತಲುಪುವಂತೆ ದಿನಾಂಕ 05, ಮೇ 2017 ರೊಳಗಾಗಿ ಸಲ್ಲಿಸಬೇಕು. ಕರಾವಿಪ ಸಂಘಟಿಸಿದ ಲೇಖಕರ ಶಿಬಿರಗಳಲ್ಲಿ ಈಗಾಗಲೇ ಭಾಗವಹಿಸಿದವರು ಅರ್ಜಿ ಸಲ್ಲಿಸುವಂತಿಲ್ಲ.

ಶಿಬಿರದಲ್ಲಿ ಭಾಗವಹಿಸಲು 20 ರಿಂದ 45 ವಯೋಮಾನದವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ನೋಂದಣಿ ಉಚಿತವಾಗಿದ್ದು, ವಿಜ್ಞಾನ ಪರಿಷತ್ತಿನಿದ ಊಟೋಪಚಾರ, ವಾಸ್ತವ್ಯ ಹಾಗೂ ಕರ್ತವ್ಯಸಹಿತರಜೆ (ಓ.ಓ.ಡಿ.) ಸೌಲಭ್ಯವನ್ನು ಒದಗಿಸಲಾಗುವುದು. ಶಿಬಿರದ ನಿಖರವಾದ ದಿನಾಂಕ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

ಹೆಚ್ಚಿನ ಮಾಹಿತಿಗೆ ಪರಿಷತ್ತಿನ ಕಚೇರಿ (080–26718939/26718962) ಅಥವಾ ಶ್ರೀ ದಾನಿ ಬಾಬುರಾವ್, ರಾಜ್ಯ ಸಂಯೋಜಕರು, “31ನೇ ಅಖಿಲ ಕರ್ನಾಟಕ ಉದಯೋನ್ಮುಖ ವಿಜ್ಞಾನ ಲೇಖಕರ ತರಬೇತಿ ಶಿಬಿರ” ಮೊ. 9448568360 ಇವರನ್ನು ಸಂಪರ್ಕಿಸಬಹುದಾಗಿದೆ.

ಕವನ::ಜಿಪಿಆರ್.

## ಡಾ. ಬಿ.ಆರ್. ಅಂಬೇಡ್ಕರ ಅವರ 2017ನೇ ಸಾಲಿನ ಪ್ರಶಸ್ತಿಗೆ

# <u>ಗುರುಪ್ರಸಾದ್ ಕೆರೆಗೋಡು ಆಯ್ಕೆ – ಪ್ರೊ. ಎಸ್.ಜಿ. ಸಿದ್ದರಾಮಯ್ಯ</u>

ಬೆಂಗಳೂರು, ಏಪ್ರಿಲ್ 12 (ಕರ್ನಾಟಕ ವಾರ್ತೆ)

ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 126ನೇ ಜನ್ಮ ದಿನೋತ್ಸವದ ಅಂಗವಾಗಿ ಪ್ರತಿವರ್ಷ ನೀಡುವ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿಗೆ 2017 ಸಾಲಿಗೆ "ಗುರುಪ್ರಸಾದ್ ಕೆರೆಗೋಡು ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಆಯ್ಕೆ ಸಮಿತಿಯ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ ಎಸ್.ಜಿ. ಸಿದ್ದರಾಮಯ್ಯ ಅವರು ಇಂದು ಪ್ರಕಟಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು ಮೂರು ದಶಕಗಳಿಂದ ದಲಿತಪರ ಸಂಘಟನೆಗಳ ಜೊತೆಯಲ್ಲಿ ಸೇರಿಕೊಂಡು ತಮ್ಮ ವೈಯಕ್ತಿಕ ಹೊಣೆಗಾರಿಕೆಯಲ್ಲಿ ಅಂಬೇಡ್ಕರ್ ಅವರ ಆಶಯವನ್ನು ಈಡೇರಿಸುವ ದಿಸೆಯಲ್ಲಿ ಕ್ರಿಯಾಶೀಲರಾಗಿ ಶ್ರಮಿಸಿದ ಗುರುಪ್ರಸಾದ್ ಕೆರೆಗೋಡು ಇವರ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಸಮಿತಿಯು 2017 ರ ಡಾ. ಬಿ. ಆರ್. ಅಂಬೇಡ್ಕರ್ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಪ್ರೊ ಎಸ್.ಜಿ. ಸಿದ್ದರಾಮಯ್ಯ ಅವರು ತಿಳಿಸಿದರು.

ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ್ಯ ಅವರು ಹಾಗೂ ಡಾ. ಸಿದ್ದಲಿಂಗಯ್ಯ ಅವರೂ ಸೇರಿದಂತೆ ಸಮಿತಿಯ ಸದಸ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಡಾ. ಅಂಬೇಡ್ಕರ್ ಆಶಯಗಳನ್ನು ರಾಜ್ಯ ಸರ್ಕಾರ ಈಡೇರಿಸುವಲ್ಲಿ ಸಫಲವಾಗಿದೆ ಎಂದು ಮಾತನಾಡಿದ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು 'ಅಂಬೇಡ್ಕರ್ ನಿವಾಸ್" ಯೋಜನೆಯಡಿ ರಾಜ್ಯದಲ್ಲಿ ಗುಡಿಸಲುಗಳಲ್ಲಿ ವಾಸಿಸುವುದು ಪರಿಶಿಷ್ಠ ಜಾತಿ ಪರಿಶಿಷ್ಟ ಪಂಗಡಗಳ ಅರ್ಜ ಫಲಾಭವಿಗಳಿಗೆ ಮನೆ ನಿರ್ಮಿಸಿಕೊಡಲಾಗುವುದು. ಅಲ್ಲದೆ ಮನೆ ನಿರ್ಮಿಸಿಕೊಳ್ಳಲು ನಿವೇಶನ ಇಲ್ಲದೆ ಕಂದಾಯ ಭೂಮಿಯಲ್ಲಿ ವಾಸಮಾಡುತ್ತಿದ್ದಲ್ಲಿ ಅಂತವರಿಗೆ ಆ ಭೂಮಿಯನ್ನು ಅವರ ಹೆಸರಿಗೆ ನೀಡಿ ಅಲ್ಲಿ ಮನೆ ನಿರ್ಮಿಸಿ ಕೊಡಲಾಗುವುದು ಎಂದರು.

ಡಾ. ಅಂಬೇಡ್ಕರ್ ಹೆಸರಿನಲ್ಲಿ ಹೋಬಳಿಗೊಂದರಂತೆ ಡಾ. ಅಂಬೇಡ್ಕರ ವಸತಿ ಶಾಲೆಗಳನ್ನು ಮುಂದಿನ ವರ್ಷದಿಂದ ಪ್ರಾರಂಭಿಸಲಾಗುವುದು. ಮೊದಲ ಹಂತದಲ್ಲಿ 125 ಶಾಲೆಗಳನ್ನು ರಾಜ್ಯದಲ್ಲಿ ಪ್ರಾರಂಭಿಸಲಾಗುವುದು ಎಂದು ಮಾತನಾಡಿದ ಸಮಾಜ ಕಲ್ಯಾಣ ಇಲಾಖೆ ಸಚಿವರು ಒಂದು ಲಕ್ಷ ಕಾರ್ಮಿಕರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು 40 ಸಾವಿರ ರೂ. ಸಾಲ ನೀಡಲಾಗುತ್ತದೆ. ಅದರಲ್ಲಿ 25 ಸಾವಿರ ರೂ ಸಬ್ಸಿಡಿ ನೀಡಲಾಗುವುದು ಎಂದರು.

ಡಾ. ಅಂಬೇಡ್ಕರ್ ಅವರ ಜನ್ಮ ದಿನವಾದ ಏಪ್ರಿಲ್ 14 ರಂದು ಬೆಳಿಗ್ಗೆ 9.30 ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಮುಂಭಾಗದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಿದ್ದು ಡಾ. ಅಂಬೇಡ್ಕರ್ ಭವನದಲ್ಲಿ ಅಂದು ಬೆಳಿಗ್ಗೆ 10 ಗಂಟೆಗೆ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವರು ತಿಳಿಸಿದರು.

ವಿ.ಸೂ. : ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ)

ಕವನ:ಕೆಪಿಪಿ ಜಿಪಿಆರ್.